**ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂ: ಬಿ12(5)/ಪಿಆರ್/35/2020-21 ದಿನಾಂಕ: 21-09-2020 ರಂತೆ ದಿನಾಂಕ: 03-09-2022 ರಂದು ಹೊಸ ವಾರ್ಡ್ ಸಂಖ್ಯೆ:112 (ವರ್ತೂರು)ರ ವಾರ್ಡ್ ಕಮಿಟಿ ಸಭೆಯನ್ನು ಗುಂಜೂರು ಕ್ಲಬ್ ಇಲ್ಲಿ ಶ್ರೀ.ವೆಂಕಟೇಶ್.ಟಿ.ಎಂ, ಸಹಾಯಕ ಅಭಿಯಂತರರು ಹಾಗೂ ನೋಡಲ್ ಅಧಿಕಾರಿಗಳು, ರವರ ಅಧ್ಯಕ್ಷತೆಯಲ್ಲಿ ನಡೆದಿರುವ ಸಭೆಯ ನಡುವಳಿಗಳು:**

**<u>ಈ ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ</u>**

1. ಶ್ರೀ.ವೆಂಕಟೇಶ್.ಟಿ.ಎಂ, ಸಹಾಯಕ ಅಭಿಯಂತರರು, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು.
2. ಶ್ರೀ.ಶ್ರೀನಿವಾಸಪ್ಪ, ಹಿರಿಯ ಆರೋಗ್ಯ ನಿರೀಕ್ಷಕರರು ಶ್ರೀ.ಬಾಲಾಜಿ, ಕಿರಿಯ ಆರೋಗ್ಯ ನಿರೀಕ್ಷಕರರು, ವಾರ್ಡ್ ವರ್ತೂರು, ಬಿ.ಬಿ.ಎಂ.ಪಿ
3. ಡಾ॥ ಸಹನಾ, ವೈದ್ಯಾಧಿಕಾರಿಗಳು ವರ್ತೂರು ಆರೋಗ್ಯ ಕೇಂದ್ರ
4. ಶ್ರೀ.ಅನೀಲ್, ಆರೋಗ್ಯ ಸಹಾಯಕರು, ಆರೋಗ್ಯ ಕೇಂದ್ರ
5. ಶ್ರೀ.ಮಂಜುನಾಥ್, ಪೊಲೀಸ್ ಇನ್ಸ್‌ಪೆಕ್ಟರ್, ವರ್ತೂರು
6. ವರ್ತೂರು ವಾರ್ಡಿನ ಶಕ್ತಿ ಕೇಂದ್ರದವರು ಹಾಗೂ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದವರು ಮತ್ತು ಸಾರ್ವಜನಿಕರು

**ಹೊಸ ವಾರ್ಡ್ ರಚನೆಯಾದ ಹಿನ್ನಲೆಯಲ್ಲಿ ವರ್ತೂರು ವಾರ್ಡ್‌ನ ವಿಷಯಗಳು ಮತ್ತು ದೂರುಗಳ ಬಗ್ಗೆ ಮತ್ತು ಕೈಗೊಳ್ಳಬೇಕಾಗಿರುವ ಕ್ರಮದ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.**

1. ಕೋವಿಡ್19ರ ಲಸಿಕೆಯ ಬುಸ್ಟರ್ ಡೋಸ್‌ನ ಬಗ್ಗೆ ಸರಿಯಾಗಿ ಪ್ರಚಾರ ಮಾಡುವ ಬಗ್ಗೆ.
   - ➢ ಸದರಿ ವಿಷಯಕ್ಕೆ ನೋಡಲ್ ಅಧಿಕಾರಿಗಳು ವೈದ್ಯಾಧಿಕಾರಿಗಳಿಗೆ ಕ್ರಮ ಕೈಗೊಳ್ಳಲು ಸೂಚಿಸಿದರು.
2. ವರ್ತೂರು ವಾರ್ಡ್‌ನಲ್ಲಿ ಸರಿಯಾಗಿ ಫಾಗಿಂಗ್ ಮತ್ತು ಸಿಂಪರಣೆ ಮಾಡುವ ಬಗ್ಗೆ.
   - ➢ ಸದರಿ ವಿಷಯಕ್ಕೆ ಹಿರಿಯ ಆರೋಗ್ಯ ನಿರೀಕ್ಷಕರು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.
3. ನಾಯಿ ಮತ್ತು ಹಾವು ಕಡಿತಕ್ಕೆ ಲಸಿಕೆ ನೀಡುವ ಬಗ್ಗೆ.
   - ➢ ಸದರಿ ವಿಷಯಕ್ಕೆ ನೋಡಲ್ ಅಧಿಕಾರಿಗಳು ವೈದ್ಯಾಧಿಕಾರಿಗಳಿಗೆ ಕ್ರಮ ಕೈಗೊಳ್ಳಲು ಸೂಚಿಸಿದರು.
4. ವರ್ತೂರು ಸರ್ಕಾರಿ ಆಸ್ಪತ್ರೆಗೆ ಆಂಬ್ಯೂಲೆನ್ಸ್ ಬೇಕಾಗಿರುವ ಬಗ್ಗೆ.
   - ➢ ಸದರಿ ವಿಷಯಕ್ಕೆ ನೋಡಲ್ ಅಧಿಕಾರಿಗಳು ವೈದ್ಯಾಧಿಕಾರಿಗಳಿಗೆ ಪತ್ರದ ಮುಖೇನ ಮೇಲಾಧಿಕಾರಿಗಳಿಗೆ ತಿಳಿಸಲು ಸೂಚಿಸಿದರು.
5. ಕಸದ ಗಾಡಿಗಳು ಸೈರನ್ ಮಾಡದೆ ಕಸ ವಿಲೇವಾರಿಗೆ ತೊಂದರೆಯಾಗುತ್ತಿರುವ ಬಗ್ಗೆ.
   - ➢ ಸದರಿ ವಿಷಯಕ್ಕೆ ಕಿರಿಯ ಆರೋಗ್ಯ ನಿರೀಕ್ಷಕರು ಸರಿಪಡಿಸುವುದಾಗಿ ತಿಳಿಸಿದರು.
6. ಅಪಾರ್ಟ್‌ಮೆಂಟ್‌ಗಳಲ್ಲಿ ಕಸ ತೆಗೆದುಕೊಳ್ಳುತ್ತಿರುವ ಬಗ್ಗೆ.
   - ➢ ಸದರಿ ವಿಷಯಕ್ಕೆ ಕಿರಿಯ ಆರೋಗ್ಯ ನಿರೀಕ್ಷಕರು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.
7. ವರ್ತೂರು ವಾರ್ಡ್‌ನಲ್ಲಿ ಕಸದ ಸಮಸ್ಯೆ ಹೆಚ್ಚಾಗಿರುವ ಹಿನ್ನಲೆಯಲ್ಲಿ ಬಿಬಿಎಂಪಿ ತಾಂತ್ರಿಕ ಶಾಖೆಯಿಂದ ವಾರಕ್ಕೆ ಒಮ್ಮೆ ಟ್ರಾಕ್ಟರ್ ಮತ್ತು ಲೇಬರ್ಸ್‌ಗಳನ್ನು ನಿಯೋಜಿಸುವಂತೆ ಆರೋಗ್ಯ ಶಾಖೆ, ರವರು ಕೋರಿದರು.
   - ➢ ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು, ತಾಂತ್ರಿಕ ಶಾಖೆಯಿಂದ ಸಹಕರಿಸುವುದಾಗಿ ತಿಳಿಸಿದರು.

Scanned by CamScanner

8. ವರ್ತೂರು-ಮುತ್ತಸಂದ್ರ ರಸ್ತೆ ವರೆಗಿನ ಸಾರ್ವಜನಿಕರು ಪಾದಚಾರಿಗಳ ಫುಟ್‌ಪಾತ್‌ನ್ನು ಅತಿಕ್ರಮಿಸಿಕೊಂಡು ಅಂಗಡಿ ಮುಂಗಟ್ಟುಗಳನ್ನು ಇಟ್ಟುಕೊಂಡು ಪಾದಚಾರಿಗಳಿಗೆ ತೊಂದರೆಯನ್ನುಂಟು ಮಾಡುತ್ತಿರುವುದರಿಂದ, ತೆರವು ಕಾರ್ಯಾಚರಣೆಯನ್ನು ಮಾಡಬೇಕಾಗಿರುವ ಬಗ್ಗೆ.
   - ➢ ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು, ಫುಟ್‌ಪಾತ್ ತೆರವು ಕಾರ್ಯಾಚರಣೆಯನ್ನು ಮಾಡುವುದಾಗಿ ತಿಳಿಸಿದರು.

9. ಡಿ.ಎಲ್.ಪಿ ರಸ್ತೆಗಳು ದುರಸ್ತಿಯಾಗಿದ್ದು, ಇದನ್ನು ಕೂಡಲೇ ಸರಿಪಡಿಸಲು ಕೋರಿ.
   - ➢ ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು, ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

10. ಗುಂಜೂರು ಅಂಗನವಾಡಿ ಕೇಂದ್ರದ ಕಟ್ಟಡವನ್ನು ದುರಸ್ತಿ ಪಡಿಸಲು ಕೋರಿ.
   - ➢ ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು, ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

11. ಗುಂಜೂರು ಉಮಾ ಮಹೇಶ್ವರಿ ದೇವಸ್ಥಾನದ ರಸ್ತೆಯಲ್ಲಿ ಚರಂಡಿ ಕಾಮಗಾರಿಯನ್ನು ಪೂರ್ಣಗೊಳಿಸದಿರುವ ಬಗ್ಗೆ.
   - ➢ ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು, ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

12. ಬಳಗೆರೆ-ಪಣತ್ತೂರು ರಸ್ತೆ ಜಂಕ್ಷನ್‌ನಲ್ಲಿ ಟ್ರಾಫಿಕ್ ಪೊಲೀಸ್‌ನ್ನು ನಿಯೋಜಿಸಲು ಕೋರಿ.
   - ➢ ಸದರಿ ವಿಷಯಕ್ಕೆ ನೋಡಲ್ ಅಧಿಕಾರಿಗಳು, ಟ್ರಾಫೀಕ್ ಪೊಲೀಸ್ ಠಾಣೆಗೆ ಪತ್ರ ಬರೆಯುವುದಾಗಿ ತಿಳಿಸಿದರು.

13. ಗುಂಜೂರು ಪಾಳ್ಯದ 4 ರಸ್ತೆಗಳಲ್ಲಿ ವಿದ್ಯುತ್ ಕಂಬ ಮತ್ತು ಬೀದಿ ದೀಪಗಳನ್ನು ಅಳವಡಿಸಲು ಕೋರಿ.
   - ➢ ಸದರಿ ವಿಷಯಕ್ಕೆ ಬೆಸ್ಕಾಂ, ಸಹಾಯಕ ಅಭಿಯಂತರರು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

14. ವರ್ತೂರು ರಸ್ತೆಯಲ್ಲಿ ಟ್ರಾಫೀಕ್ ಸಮಸ್ಯೆ ಹೆಚ್ಚಾಗಿರುವ ಬಗ್ಗೆ.
   - ➢ ಸದರಿ ವಿಷಯಕ್ಕೆ ನೋಡಲ್ ಅಧಿಕಾರಿಗಳು, ಎಸ್.ಹೆಚ್-34 ರಸ್ತೆ ಕಾಮಗಾರಿ ನಡೆಯುತ್ತಿರುವುದರಿಂದ ಟ್ರಾಫೀಕ್ ಸಮಸ್ಯೆ ಹೆಚ್ಚಾಗಿದ್ದು, ಮುಂಬರುವ ದಿನಗಳಲ್ಲಿ ಇದು ಸುಗಮ ಸಂಚಾರಿ ರಸ್ತೆಯಾಗುವುದಾಗಿ ತಿಳಿಸಿದರು.

15. ಗುಂಜೂರು ರಸ್ತೆಯ -ಮೈನಾ ಅಪಾರ್ಟ್‌ಮೆಂಟ್‌ನ ಹೆಚ್ಚುವರಿ ನೀರನ್ನು ರಸ್ತೆಗೆ ಬಿಡುತ್ತಿರುವ ಬಗ್ಗೆ.
   - ➢ ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು, ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಅಂತಿಮವಾಗಿ ನೋಡಲ್ ಅಧಿಕಾರಿಗಳು ಸಕಾಲದಲ್ಲಿ ಸಾರ್ವಜನಿಕರ ಕುಂದು ಕೊರತೆಗಳನ್ನು ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಳ್ಳುವಂತೆ ಹಾಗೂ ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿಗಳಿಗೆ ಸಮನ್ವತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿರುತ್ತಾರೆ. ನೋಡಲ್ ಅಧಿಕಾರಿ ರವರ ಸೂಚನೆಯಂತೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಕಾರ್ಯದರ್ಶಿ**
**ಸಹಾಯಕ ಅಭಿಯಂತರರು**
**ವಾರ್ಡ್ ನಂ: 112**

**ಪ್ರತಿಯನ್ನು**

1. ಮಾನ್ಯ ಜಂಟಿ ಆಯುಕ್ತರು, ಬಿ.ಬಿ.ಎಂ.ಪಿ ಮಹದೇವಪುರ ವಲಯ,ರವರ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಮುಖ್ಯ ಅಭಿಯಂತರರು, ಬಿ.ಬಿ.ಎಂ.ಪಿ ಮಹದೇವಪುರ ವಲಯ, ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ಡಿ.ಹೆಚ್.ಓ ಬಿ.ಬಿ.ಎಂ.ಪಿ ಮಹದೇವಪುರ ವಲಯ, ರವರ ಸೂಕ್ತ ಮಾಹಿತಿ/ಕ್ರಮಕ್ಕಾಗಿ ಸಲ್ಲಿಸಿದೆ.
4. ಎಲ್ಲಾ ಅಧಿಕಾರಿ ಸಿಬ್ಬಂದಿಗಳ ಕ್ರಮಕ್ಕಾಗಿ.
5. ಎಲ್ಲಾ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
6. ಕಛೇರಿ ಪ್ರತಿ.

Scanned by CamScanner